

ಶಿಡ್ಲಘಟ್ಟ: ಹಿಂದುಳಿದ ವರ್ಗಗಳ ಸಾಮಾಜಿಕ, ಆರ್ಥಿಕ ಹಾಗೂ ಶೈಕ್ಷಣಿಕ ಪ್ರಗತಿಗೆ ಡಿ. ದೇವರಾಜ ಅರಸು ಅವರ ಕೊಡುಗೆ ಅಪಾರ. 'ಉಳುವವನೇ ಭೂಮಿಯ ಒಡೆಯ' ಎಂಬ ಆಶಯದೊಂದಿಗೆ ಜಾರಿಗೊಳಿಸಿದ ಭೂಸುಧಾರಣಾ ಕ್ರಮಗಳು ಸಾವಿರಾರು ಕೃಷಿಕ ಕುಟುಂಬಗಳಿಗೆ ಭೂಮಿಯ ಮೇಲೆ ಕಾನೂನುಬದ್ಧ ಹಕ್ಕು ದೊರೆಯಲು ದಾರಿ ಮಾಡಿಕೊಟ್ಟಿವೆ ಎಂದು ತಹಸೀಲ್ದಾರ್ ಗಗನಸಿಂಧು ಹೇಳಿದರು. ನಗರದ ಹೊರವಲಯದ ವರದನಾಯಕನಹಳ್ಳಿಯ ಡಿ. ದೇವರಾಜ ಅರಸು ಭವನದಲ್ಲಿ ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ತಾಲೂಕು ಆಡಳಿತ, ತಾಲೂಕು ಪಂಚಾಯಿತಿ ಹಾಗೂ ನಗರಸಭೆ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಹಿಂದುಳಿದ ವರ್ಗಗಳ ಕ್ರಾಂತಿಯ ಹರಿಕಾರ ಡಿ. ದೇವರಾಜ ಅರಸು ಅವರ 111ನೇ ಜನ್ಮದಿನೋತ್ಸವದಲ್ಲಿ ಅವರು ಮಾತನಾಡಿದರು. ಭೂ ಸುಧಾರಣೆಯಂತಹ ಕ್ರಾಂತಿಕಾರಿ ಕ್ರಮಗಳ ಮೂಲಕ ದುಡಿಯುವ ರೈತರಿಗೆ ಭೂಮಿಯ ಹಕ್ಕು ಕಲ್ಪಿಸುವುದರ ಜತೆಗೆ ಹಿಂದುಳಿದ ಹಾಗೂ ದುರ್ಬಲ ವರ್ಗಗಳ ಏಳಿಗೆಗೆ ಅರಸು ಅವರು ಹಲವು ಯೋಜನೆಗಳನ್ನು ಜಾರಿಗೊಳಿಸಿದರು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕ ಗಳಿಸಿದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು. ತಾಪಂ ಇಒ ಹೇಮಾವತಿ, ಪೌರಾಯುಕ್ತೆ ಅಮೃತ, ಚಿಮೂಲ್ ನಿರ್ದೇಶಕ ಹುಜಗೂರು ರಾಮಯ್ಯ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಸುರೇಶ್, ಬಿಇಒ ಪಿ. ಸ್ವಾಮಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ನಿರ್ದೇಶಕ ನವೀನ್ ಕುಮಾರ್, ಜಿಲ್ಲಾ ಜಾಗೃತಿ ಸಮಿತಿ ಸದಸ್ಯ ಜಗದೀಶ್, ಜಿಲ್ಲಾ ಸಫಾಯಿ ಸಮಿತಿ ಸದಸ್ಯ ಲಕ್ಷ್ಮಣ್ ರಾಜು, ಹಿಂದುಳಿದ ಅಲೆಮಾರಿ ವರ್ಗಗಳ ಸಮಿತಿ ಸದಸ್ಯ ಶ್ರೀನಿವಾಸ್ ಮತ್ತಿತರರು ಉಪಸ್ಥಿತರಿದ್ದರು.

ಸ್ವಯಂ ರಕ್ಷಣಾ ಕಲೆಗಳ ಅಭ್ಯಾಸ ಮಾಡಲು ಶ್ರೀನಿವಾಸಗೌಡ ಸಲಹೆ



ಕೋಲಾರ: ವಿದ್ಯಾರ್ಥಿಗಳು ಸ್ವಯಂ ರಕ್ಷಣಾ ತಂತ್ರಗಳನ್ನು ಕಲಿಯಬೇಕು, ಇಲ್ಲವಾದಲ್ಲಿ ಅವರ ಬದುಕಿನಲ್ಲಿ ಎದುರಾಗುವ ಸಮಸ್ಯೆಗಳಿಗೆ ತಲೆಭಾಗಬೇಕಾಗುತ್ತದೆ, ಕರಾಟೆ ಮತ್ತಿತರ ಸ್ವಯಂ ರಕ್ಷಣಾ ಕಲೆಗಳನ್ನು ಅಭ್ಯಾಸ ಮಾಡಿ ಉತ್ತಮ ಬದುಕು ರೂಪಿಸಿಕೊಳ್ಳಿ ಎಂದು ಸರ್ಕಾರಿ ಮಹಿಳಾ ಕಾಲೇಜಿನ ಪ್ರಾಂಶುಪಾಲ ಪ್ರೊ.ಕೆ. ಶ್ರೀನಿವಾಸಗೌಡ ಕರೆ ನೀಡಿದರು. ಬೆಂಗಳೂರು ಉತ್ತರ ವಿವಿ ಹಾಗೂ ಸರ್ಕಾರಿ ಮಹಿಳಾ ಕಾಲೇಜು, ಕೋಲಾರದ ಪಿ.ಎಂ. ಉಷಾ ಘಟಕದಿಂದ ವಿದ್ಯಾರ್ಥಿನಿಯರಿಗಾಗಿ ಮೂರು ದಿನಗಳ 'ಸ್ವಯಂ ರಕ್ಷಣಾ ತರಬೇತಿ ಕಾರ್ಯಾಗಾರ' ಉದ್ಘಾಟಿಸಿ ಮಾತನಾಡಿದರು. ಹೆಣ್ಣು ಮಕ್ಕಳಿಗೆ ಸಮಾಜ ಸಮಾನ ಸ್ಥಾನ ಮಾನ ನೀಡಿದೆ ಅವರೂ ಸಹಾ ತಮ್ಮ ಆತ್ಮರಕ್ಷಣೆಗೆ ಕರಾಟೆ ಕಲೆ ಕಲಿತು ಸಮಾಜದಲ್ಲಿ ಧೈರ್ಯದಿಂದ ಜೀವನ ನಡೆಸುವ ಶಕ್ತಿ ಬೆಳೆಸಿಕೊಳ್ಳಬೇಕು, ಗಂಡು ಮಕ್ಕಳು ಇಂದೂ ದೌರ್ಜನ್ಯಕ್ಕೆ ಒಳಗಾಗುತ್ತಿದ್ದು ಅವರಿಗೂ ಸ್ವಯಂ ರಕ್ಷಣಾ ಕೌಶಲ್ಯದ ಅಗತ್ಯ ಎಂದರು. ಸಂಪನ್ಮೂಲ ವ್ಯಕ್ತಿಗಳಾದ ವ್ಯಕ್ತಿ ಸತ್ಯಶ್ರೀ ಎಸ್., ದರ್ಶನ್, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಡಾ.ಮುರಳೀಧರ್ ಎಸ್, ಪಿ.ಎಂ.ಉಷಾ ಘಟಕದ ಸಂಚಾಲಕ ಡಾ. ವಿಶ್ವಲಿಂಗ ಪ್ರಸಾದ್, ದೈಹಿಕ ಶಿಕ್ಷಣ ನಿರ್ದೇಶಕ ಡಾ. ಸುಬ್ರಮಣಿ.ಎನ್, ಗ್ರಂಥಪಾಲಕ ಡಾ.ಶ್ರೀನಿವಾಸ್ ಇದ್ದರು.

ಬೀಜ ನಿಗಮದ ಅಧ್ಯಕ್ಷ ಎಂ.ಆಂಜಿನಪ್ಪ ತಿಳಿಸಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಡಿ. ದೇವರಾಜು ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ಇವರ ಸಂಯುಕ್ತಾಶ್ರಯದಲ್ಲಿ ನಗರದ ಕನ್ನಡ ಭವನದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಡಿ. ದೇವರಾಜ ಅರಸು ಅವರ 111ನೇ ಜನ್ಮ ದಿನಾಚರಣೆಯ ಕಾರ್ಯಕ್ರಮದಲ್ಲಿ ಅರಸು ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಅವರು ಮಾತನಾಡಿದರು.

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ವರ್ಗಗಳಲ್ಲಿ ಇರುವಂತೆ ಇತರ ಹಿಂದುಳಿದ



ನಗರದ ಕನ್ನಡ ಭವನದಲ್ಲಿ ನಡೆದ ಡಿ. ದೇವರಾಜ ಅರಸು ರವರ 111ನೇ ಜನ್ಮ ದಿನಾಚರಣೆಯ ಕಾರ್ಯಕ್ರಮದಲ್ಲಿ ಅರಸು ಅವರ ಭಾವಚಿತ್ರಕ್ಕೆ ಎಂ. ಆಂಜಿನಪ್ಪ ಪುಷ್ಪ ನಮನ ಸಲ್ಲಿಸಿದರು

ವರ್ಗಗಳಲ್ಲೂ ಬಡತನ, ಅನಕ್ಷರತೆ ಇದ್ದು ಸರ್ಕಾರದ ಸೌಲತ್ತುಗಳಿಂದ ವಂಚಿತರಿದ್ದಾರೆ. ಆದ್ದರಿಂದ ಹಿಂದುಳಿದ ವರ್ಗದವರನ್ನು ಮುಖ್ಯ ವಾಹಿನಿಗೆ ತರುವ ನಿಟ್ಟಿನಲ್ಲಿ ಅನೇಕ ಕ್ರಾಂತಿಕಾರಕ ಯೋಜನೆಗಳನ್ನು ಜಾರಿಗೆ ತಂದು ಜನಮಾನಸದಲ್ಲಿ ಚಿರಸ್ಥಾಯಿಯಾಗಿರುವ ಜನನಾಯಕ ಎಂದರೆ ದೇವರಾಜ ಅರಸು ಎಂದು ಬಣ್ಣಿಸಿದರು.

ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್ ಮಾತನಾಡಿ, ಅರಸು ಅವರು ಭೂಸುಧಾರಣೆ ಕಾಯ್ದೆಯನ್ನು ರಾಜ್ಯದಲ್ಲಿ ಜಾರಿಗೆ ತಂದು ಮೈಸೂರು ರಾಜ್ಯ ಎಂಬ ಹೆಸರನ್ನು ಕರ್ನಾಟಕ ಎಂದು ನಾಮಕರಣ ಮಾಡಿದರು. ಒಟ್ಟಾರೆ ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗೆ ಶ್ರಮಿಸಿದ ಧೀಮಂತ ರಾಜಕಾರಣಿ ಅರಸು ಎಂದು ಬಣ್ಣಿಸಿದರು.

ಅರಸು ವಿಚಾರ ಅಳವಡಿಸಿಕೊಳ್ಳಿ: ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಯಲುವಳ್ಳಿ ಎನ್. ರಮೇಶ್ ಮಾತನಾಡಿ, ಪ್ರಸ್ತುತದ ಆಡಳಿತದ ಕ್ರಮಗಳಲ್ಲಿ ಅರಸುರವರ ಕೊಡುಗೆಗಳೇ ಹೆಚ್ಚು. ವಿದ್ಯಾರ್ಥಿಗಳು ಅವರ ಪುಸ್ತಕಗಳನ್ನು ಓದಬೇಕು ಹಾಗೂ ಅವರ ಸಾಧನೆಗಳನ್ನು ಅರಿತು ಅವರ ವಿಚಾರಗಳನ್ನು ಜೀವನದಲ್ಲಿ ರೂಢಿಸಿಕೊಳ್ಳಬೇಕು ಇವರ ಜಯಂತಿ ಒಂದು ದಿನಕ್ಕೆ ಮತ್ತು ವರ್ಗಕ್ಕೆ ಸೀಮಿತ ಆಗಬಾರದು ಎಂದು

ಶಾಲೆ ಮತ್ತು ವಸತಿ ಕಾಲೇಜುಗಳಲ್ಲಿ ಅತಿ ಹೆಚ್ಚು ಅಂಕಗಳನ್ನು ಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು. ಶಿಕ್ಷಣ ಕ್ಷೇತ್ರದಿಂದ ಪ್ರೊ. ಕೋಡಿರಂಗಪ್ಪ, ಸಮಾಜ ಸೇವೆ ಕ್ಷೇತ್ರದಿಂದ ಆರ್. ಸುಬ್ರಮಣ್ಯಂ, ಕಲಾವಿಧ ಚಿಕ್ಕ ವೆಂಕಟಪ್ಪ, ನಿಲಯ ಮೇಲ್ವಿಚಾರಕ ಎಸ್.ವೆಂಕಟೇಶ್ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಪಂ ಉಪಕಾರ್ಯದರ್ಶಿ ಅತಿಕ್ ಪಾಷಾ, ತಹಸೀಲ್ದಾರ್ ರಶ್ಮಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಮಾನುಜಂ, ಪಶುಪಾಲನ ಇಲಾಖೆಯ ಉಪ ನಿರ್ದೇಶಕ ರಂಗಪ್ಪ, ಜಿಲ್ಲಾ ಕಾರ್ಮಿಕ ಅಧಿಕಾರಿ ಶಬಾನ ಆಜ್ಮಿ, ಡಿಡಿಪಿಐ ವಿ.ರಮೇಶ್ ಇದ್ದರು.

ಸಾಮಾಜಿಕ ನ್ಯಾಯದ ಹರಿಕಾರ ಅರಸು

ಬಂಗಾರಪೇಟೆಯಲ್ಲಿ ದೇವರಾಜ ಅರಸು 111ನೇ ಜಯಂತಿಯಲ್ಲಿ ಎಲ್.ರಾಮಕೃಷ್ಣ ಅಭಿಮತ

• **ಕನ್ನಪ್ರಭ ವಾರ್ತೆ** ಬಂಗಾರಪೇಟೆ

ಕರ್ನಾಟಕದಲ್ಲಿ ಪ್ರಭಾವಿ ರಾಜಕಾರಣಿಗಳಲ್ಲಿ ಮಾಜಿ ಮುಖ್ಯಮಂತ್ರಿ ದಿ. ದೇವರಾಜ ಅರಸು ಒಬ್ಬರಾಗಿದ್ದು, ಸಾಮಾಜಿಕ ನ್ಯಾಯ ಮತ್ತು ಕ್ರಾಂತಿಕಾರಿ ಸುಧಾರಣೆಗಳ ಹರಿಕಾರರೆಂದು ಇಂದಿಗೂ ಸ್ಮರಿಸಲಾಗುತ್ತಿದೆ ಎಂದು ಹಿಂದುಳಿದ ವರ್ಗಗಳ ಒಕ್ಕೂಟದ ಗೌರವ ಅಧ್ಯಕ್ಷ ಎಲ್.ರಾಮಕೃಷ್ಣ ಹೇಳಿದರು.

ನಗರದ ತಾಲೂಕು ಕಚೇರಿಯಲ್ಲಿ ತಾಲೂಕು ಆಡಳಿತ ಹಾಗೂ ಹಿಂದುಳಿದ ವರ್ಗಗಳ ಒಕ್ಕೂಟದ ವತಿಯಿಂದ ಹಮ್ಮಿಕೊಂಡಿದ್ದ ದಿ. ಮಾಜಿ ಮುಖ್ಯಮಂತ್ರಿ ದೇವರಾಜ ಅರಸು 111ನೇ ಜಯಂತಿಯಲ್ಲಿ ಮಾತನಾಡಿದ ಅವರು, ಅಂದಿನ ಕಾಲದಲ್ಲಿ ಬಡವರ ಬಳಿ ಭೂಮಿ ಇರಲಿಲ್ಲ. ಶ್ರೀಮಂತರ ಕಪಿಮುಷ್ಟಿಯಲ್ಲಿ ಸಾವಿರಾರು ಜಮೀನುಗಳಿದ್ದವು. ದೇವರಾಜ ಅರಸು ಮುಖ್ಯಮಂತ್ರಿಯಾದ ಬಳಿಕ ಉಳುವವನೇ ಭೂಮಿ ಒಡೆಯ ಎಂಬ ಐತಿಹಾಸಿಕ ತತ್ವವನ್ನು ಜಾರಿಗೆ ತಂದು ಬಡ ರೈತರಿಗೆ ಭೂಮಿ ಸುಗುವಂತೆ ಮಾಡಿದರು ಎಂದರು.

ಹಿಂದುಳಿದ ಸಮುದಾಯಗಳು ಮುಖ್ಯ ವಾಹಿನಿಗೆ: ಹಿಂದುಳಿದ ವರ್ಗಗಳ ಒಕ್ಕೂಟದ ತಾಲೂಕು ಅಧ್ಯಕ್ಷ ಕುಂಬಾರಪಾಳ್ಯ



ಬಂಗಾರಪೇಟೆ ತಾಲೂಕು ಕಚೇರಿಯಲ್ಲಿ ದಿ. ಮಾಜಿ ಸಿಎಂ ದೇವರಾಜ ಅರಸು ಜಯಂತಿಯನ್ನು ಆಚರಿಸಲಾಯಿತು.

ಮಂಜುನಾಥ್ ಮಾತನಾಡಿ, ದೇವರಾಜ ಅರಸು ಅವರ ದೂರದೃಷ್ಟಿ ಯೋಜನೆಗಳಿಂದ ಇಂದು ಹಿಂದುಳಿದ ಸಮುದಾಯಗಳು ಸಮಾಜದ ಮುಖ್ಯವಾಹಿನಿಗೆ ಬರುವಂತಾಗಿದೆ, ದೇವರಾಜು ಅರಸು ರವರ ಜಯಂತಿಯನ್ನು ನಾಲ್ಕು ಗೋಡೆಗಳ ಮಧ್ಯ ಆಚರಿಸುವಂತಾಗಿರುವುದು ಅತ್ಯಂತ ನೋವಿನ ಸಂಗತಿಯಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸಭೆಯಲ್ಲಿ ಉಪ ತಹಸೀಲ್ದಾರ್ ಹುಚ್ಚರಾಯಪ್ಪ, ಗ್ರೇಡ್ 2 ತಹಸೀಲ್ದಾರ್ ಅನ್ಸಾರಿ ಮೇರಿ, ಬಿಸಿಎಂ ತಾಲೂಕು ಅಧಿಕಾರಿ ಅನಿತಾ, ಹಿಂದುಳಿದ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಚಿನ್ನಿವೆಂಕಟೇಶ್, ಉಪಾಧ್ಯಕ್ಷ ಬಿ.ಟಿ.ಆನಂದ್ ಕುಮಾರ್, ಪತ್ರಿಕೆ ಸಲಹೆಗಾರ ಕೆ.ರಮೇಶ್, ಶಿಕ್ಷಕ ರಾಜಪ್ಪ, ಕೆ.ರಾಮಮೂರ್ತಿ, ಕೃಷ್ಣೇಗೌಡ, ಕಾರಹಳ್ಳಿ ಶ್ರೀನಿವಾಸ್ ಇತರರು ಇದ್ದರು.

ದೇವರಾಜ ಅರಸು ಆದರ್ಶಗಳನ್ನು ಪಾಲಿಸಿ

ದೇವರಾಜ ಅರಸು ಅವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಪರಿಮಳ ಸಲಹೆ

ಗುಡಿಬಂಡೆ: ಸಮಾಜದ ಅಭಿವೃದ್ಧಿಗಾಗಿ ಶ್ರಮಿಸಿದ ಮಹನೀಯರ ಜಯಂತಿಯನ್ನು ಆಚರಿಸುವುದಷ್ಟೇ ಸಾಲದು. ಅವರು ತೋರಿದ ಆದರ್ಶಗಳು ಮತ್ತು ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಜಯಂತಿ ಆಚರಣೆಗೆ ನಿಜವಾದ ಅರ್ಥ ದೊರೆಯುತ್ತದೆ ಎಂದು ನ್ಯೂ ವಿಷನ್ ಇಂಗ್ಲಿಷ್ ಶಾಲೆಯ ಮುಖ್ಯಸ್ಥೆ ಪರಿಮಳ ತಿಳಿಸಿದರು.

ಪಟ್ಟಣದ ಹೊರವಲಯದಲ್ಲಿರುವ ದೇವರಾಜ ಅರಸು ಭವನದಲ್ಲಿ ರಾಷ್ಟ್ರೀಯ ಹಬ್ಬಗಳ ಆಚರಣಾ ಸಮಿತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಆಯೋಜಿಸಿದ್ದ ದಿ. ಡಿ. ದೇವರಾಜ ಅರಸು ಅವರ ಜನ್ಮದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ದೇವರಾಜ ಅರಸು ಅವರು ಬಡವರು ಹಾಗೂ ಹಿಂದುಳಿದ ವರ್ಗಗಳ ಅಭಿವೃದ್ಧಿಯನ್ನು ತಮ್ಮ ಆಡಳಿತದ ಪ್ರಮುಖ ಉದ್ದೇಶವನ್ನಾಗಿ ಮಾಡಿಕೊಂಡು ಹಲವು ಜನಪರ ಕಾರ್ಯಕ್ರಮಗಳನ್ನು ಜಾರಿಗೆ ತಂದಿದ್ದರು ಎಂದರು.



ಪಟ್ಟಣದ ಹೊರವಲಯದಲ್ಲಿರುವ ದೇವರಾಜ ಅರಸು ಭವನದಲ್ಲಿ ದಿ. ಡಿ. ದೇವರಾಜ ಅರಸು ಅವರ ಜನ್ಮದಿನಾಚರಣೆ ಕಾರ್ಯಕ್ರಮ ನಡೆಯಿತು.

ಕೃಷಿಕ ಸಮಾಜದ ತಾಲೂಕು ಅಧ್ಯಕ್ಷ ಮಂಜುನಾಥರೆಡ್ಡಿ ಮಾತನಾಡಿ, ದಿ.ಡಿ. ದೇವರಾಜ ಅರಸು ಅವರು, ಭೂ ಸುಧಾರಣಾ ಕಾಯ್ದೆ ಸೇರಿದಂತೆ ಹಲವು ಜನಪರ ಕಾರ್ಯಕ್ರಮಗಳನ್ನು ಜಾರಿಗೆ ತರುವ ಮೂಲಕ ಹಿಂದುಳಿದ ವರ್ಗಗಳು ಸೇರಿದಂತೆ ಸಮಾಜದ ವಿವಿಧ ವರ್ಗಗಳ ಶ್ರೇಯೋಭಿವೃದ್ಧಿಗೆ ಶ್ರಮಿಸಿದ ಮಹಾನ್ ನಾಯಕ ಎಂದರು.

ಕಾರ್ಯಕ್ರಮದಲ್ಲಿ ಮುಖಂಡರಾದ ರಿಯಾಜ್ ಪಾಷ, ಅಂಬರೀಶ್ ಅರಸು ರವರ ಸಾಧನೆಗಳ ಬಗ್ಗೆ ಮಾತನಾಡಿದರು. ಇದೇ ಸಮಯದಲ್ಲಿ ವಿವಿಧ ಹಿಂದುಳಿದ ಸಮುದಾಯಗಳ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಪಪಂ ಅಧ್ಯಕ್ಷ ವಿಕಾಸ್, ಮುಖ್ಯಾಧಿಕಾರಿ ಆರತಿ, ಸರ್ಕಾರಿ ನೌಕರರ ಸಂಘದ ಮುನಿಕೃಷ್ಣಪ್ಪ, ನಟರಾಜ್, ಪಪಂ ಸದಸ್ಯರಾದ ಬಷೀರ್, ರಾಜೇಶ್, ಬಿಸಿಎಂ ಇಲಾಖೆಯ ವಿಸ್ತರಣಾಧಿಕಾರಿ ಚಂದ್ರಶೇಖರ್ ಹಾಜರಿದ್ದರು.

ಹಿಂದುಳಿದ ವರ್ಗಗಳ ಹರಿಕಾರ ಅರಸು: ರಾಜಪ್ಪ

ಡಿ.ದೇವರಾಜ ಅರಸು 111ನೇ ಜನ್ಮ ದಿನಾಚರಣೆ ಸಮಾರಂಭದಲ್ಲಿ ಎಲ್.ರಾಜಪ್ಪ ಅಭಿಮತ

• **ಕನ್ನಡಪ್ರಭ ವಾರ್ತೆ** ಕೋಲಾರ

ಅಪ್ರತಿಮ ರಾಜಕಾರಣಿ, ಮಾನವತಾವಾದಿ, ಹಿಂದುಳಿದ ವರ್ಗಗಳ ಹರಿಕಾರ ಡಿ.ದೇವರಾಜ ಅರಸು ನಮ್ಮ ದೇಶ, ರಾಜ್ಯ ಮುನ್ನಡೆಸಿದ ವ್ಯಕ್ತಿ ಎಂದು ಸಂಪನ್ಮೂಲ ವ್ಯಕ್ತಿ ಎಲ್.ರಾಜಪ್ಪ ತಿಳಿಸಿದರು.

ಗುರುವಾರ ನಗರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ಡಿ.ದೇವರಾಜ ಅರಸು 111ನೇ ಜನ್ಮ ದಿನಾಚರಣೆ ಸಮಾರಂಭದಲ್ಲಿ ಮಾತನಾಡಿ, ರಾಜ್ಯದಲ್ಲಿ ಭೂ ಸುಧಾರಣಾ ಕಾಯ್ದೆ ಉಳುವವರಿಗೆ ಭೂಮಿ ಜಾರಿಗೆ ತಂದವರು ಅರಸು ಎರಡು ಬಾರಿ ಸಿಎಂ ಆಗಿ ಆಯ್ಕೆಯಾದ ಅವರು ಬಡವರ, ರೈತರ ಶ್ರೇಯೋಭಿವೃದ್ಧಿ ಶ್ರಮಿಸಿದವರು. ಅಲ್ಲದೆ ಜೀತ ಮುಕ್ತ ಪದ್ಧತಿ ಜಾರಿಗೆ ತಂದವರು. ಮಲಹೊರುವ ಪದ್ಧತಿ ವಿರೋಧಿಸಿ ನಿರ್ಮೂಲನೆಗೆ ಶ್ರಮಿಸಿದರು. ಹಿಂದುಳಿದ ವರ್ಗಗಳ ಮೀಸಲಾತಿಗೆ ಎಲ್.ಜಿ.ಹಾವನೂರು ಆಯೋಗ ಸ್ಥಾಪಿಸಿದರು. ಇಂತಹ ಮಹನೀಯರ ಜಯಂತಿ ಆಚರಿಸುತ್ತಿರುವುದು ಹೆಮ್ಮೆಯ ವಿಚಾರ ಎಂದು ತಿಳಿಸಿದರು.

ಅಪರ ಪೊಲೀಸ್ ವರಿಷ್ಠಾಧಿಕಾರಿ ಜಗದೀಶ್ ಮಾತನಾಡಿ, ಹುಣುಸೂರಿನ ಕಲ್ಲಹಳ್ಳಿಯಲ್ಲಿ ಜನಿಸಿದ ಅರಸು ತಮ್ಮ ಮೇರು ವ್ಯಕ್ತಿತ್ವದಿಂದ ಸಿಎಂಯಂತಹ ಉನ್ನತ ಹುದ್ದೆಗೆ ಏರಿ ಸಮಾಜ ಸುಧಾರಣೆಯಲ್ಲಿ



ಕೋಲಾರದ ಟಿ.ಚನ್ನಯ್ಯ ರಂಗಮಂದಿರದಲ್ಲಿ ಡಿ.ದೇವರಾಜ ಅರಸು 111ನೇ ಜನ್ಮ ದಿನಾಚರಣೆ ಸಮಾರಂಭ ಸಂಪನ್ಮೂಲ ವ್ಯಕ್ತಿ ಎಲ್.ರಾಜಪ್ಪ ಉದ್ಘಾಟಿಸಿದರು.

ಪ್ರಮುಖ ಪಾತ್ರವಹಿಸಿದ್ದು, ಎಲ್ಲರೂ ಅಚ್ಚರಿ ಪಡುವಂತದ್ದು ಎಂದು ತಿಳಿಸಿದರು.

ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಕೆ.ವಿ.ರಾಮ್‌ಪ್ರಸಾದ್ ಮಾತನಾಡಿ, ಡಿ.ದೇವರಾಜು ಅರಸು ರೈತರು, ಬಡವರು, ಮಹಿಳೆಯರು, ಹಿಂದುಳಿದವರ ಏಳ್ಗೆಗೆ ಶ್ರಮಿಸಿದವರು. ಅವರು ಹುಟ್ಟಿದ ಗ್ರಾಮವನ್ನು ಸರ್ಕಾರ ದತ್ತು ಗ್ರಾಮವನ್ನಾಗಿ ಮಾಡಿದೆ. ಈಗಿರುವ ಎಲೆಕ್ಟ್ರಾನಿಕ್ ಸಿಟಿ ಅಭಿವೃದ್ಧಿ ಪಡಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ. ಧೀಮಂತ ನಾಯಕರಲ್ಲಿ ಇವರು ಅಗ್ರಜರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತಿಗಳ ಸಮುದಾಯಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಲ್.ಎ.ಮಂಜುನಾಥ್, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾಧ್ಯಕ್ಷ ವೈ. ಶಿವಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾಧಿಕಾರಿ ಗೀತಮ್ಮ ಇದ್ದರು.

ಕಾಂಗ್ರೆಸ್‌ನಿಂದ ಹಣ್ಣು, ಬ್ರೆಡ್ ವಿತರಣೆ



ಚಿಕ್ಕಬಳ್ಳಾಪುರ: ಕಲ್ಲಹಳ್ಳಿಯ ಮಣ್ಣಿನಲ್ಲಿ ಅರಳಿದ ಅರಸು ಎಂಬ ಹೂವು ಕೇವಲ ವ್ಯಕ್ತಿಯಾಗಿರಲಿಲ್ಲ, ಕರ್ನಾಟಕದ ಸಾಮಾಜಿಕ ನ್ಯಾಯದ ಪರಿಮಳವಾಗಿದ್ದರು ಎಂದು ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಲಾಯರ್ ನಾರಾಯಣಸ್ವಾಮಿ ತಿಳಿಸಿದರು.

ದಿವಂಗತ ದೇವರಾಜ ಅರಸು ಜನ್ಮದಿನಾಚರಣೆ ಪ್ರಯುಕ್ತ ಗುರುವಾರ ನಗರದ ಮಹಿಳೆ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ರೋಗಿಗಳಿಗೆ ಹಣ್ಣು, ಬ್ರೆಡ್ ವಿತರಿಸಿ ಮಾತನಾಡಿ, ದಲಿತ ದಮನಿತ ವರ್ಗಗಳಿಗೆ ಆಶಾಕಿರಣವಾಗಿ, ಹಿಂದುಳಿದವರ ಬದುಕಿಗೆ ಹೊಸ ದಾರಿಯಾದವರು ಅರಸು. ರೈತರ ಪಾಲಿಗೆ ಹಕ್ಕಿನ ಧ್ವನಿಯಾಗಿ, ಅಭಿವೃದ್ಧಿಯ ಹೆಜ್ಜೆ ಗುರುತು ಮೂಡಿಸಿದವರು ಅರಸು ಎಂಬುದಕ್ಕೆ ರಾಜ್ಯದ ರಾಜಕೀಯ ಮತ್ತು ಸಾಮಾಜಿಕ ಇತಿಹಾಸದಲ್ಲಿ ದಾಖಲಾಗಿರುವ ಅವರ ಕೊಡುಗೆಯೇ ಸಾಕ್ಷಿ ಎಂದು ತಿಳಿಸಿದರು.

ಅರಸು ಅವರ ಆಡಳಿತದ ಅತ್ಯಂತ ಗಮನಾರ್ಹ ಕೊಡುಗೆಗಳಲ್ಲಿ ಭೂಸುಧಾರಣೆ ಪ್ರಮುಖವಾದುದು. ಉಳುವವನೇ ಭೂಮಿಯ ಒಡೆಯ ಎಂಬ ಆಶಯವನ್ನು ಕಾರ್ಯರೂಪಕ್ಕೆ ತರುವ ಭೂಸುಧಾರಣಾ ಕ್ರಮಗಳು ಗ್ರಾಮೀಣ ಸಮಾಜದ ಸ್ವರೂಪವನ್ನೇ ಬದಲಿಸುವಲ್ಲಿ ಮಹತ್ವದ ಪಾತ್ರ ವಹಿಸಿದವು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅಹಿಂದ ಜಿಲ್ಲಾಧ್ಯಕ್ಷ ಕಳವಾರ ಶ್ರೀಧರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಮಂಜುನಾಥ್, ತಿರುಮಲಪ್ಪ, ಮಹಿಳಾ ಕಾಂಗ್ರೆಸ್ ಮಾಜಿ ಅಧ್ಯಕ್ಷೆ ಸುಮಿತ್ರಾ ನಾರಾಯಣಸ್ವಾಮಿ, ಉಷಾ, ಮಂಜುಳಾ ಮತ್ತಿತರರು ಇದ್ದರು.

ಮುಳಬಾಗಿಲಿನಲ್ಲಿ ಅರಸು ಜಯಂತಿ



ಮುಳಬಾಗಿಲು: ತಾಲೂಕು ಆಡಳಿತದಿಂದ ರಾಜ್ಯದ ಮಾಜಿ ಸಿಎಂ ದಿ.ಡಿ.ದೇವರಾಜ್

PUBLIC NOTICE

That my client Sri. A Ramesh S/o M Ananthappa, Aged about 59 Years, R/at: K. Mallasandra Village, Kasaba Hobli, Hosakote Taluk, Bengaluru Rural District and Sri. Sunil Kumar S/o Murthy, aged about 47 years, R/at Naganayanakote Village, Anugondanahalli Hobli, Hosakote Taluk, Bengaluru Rural District, Intends to purchase the schedule property from land owner namely Sri. L P Raghu S/o Late L S Parthasarathi, Aged about 63 years, R/at: Door No.57, Sapthagiri Nilaya, Srinivasanagara, Kittaganur Main Road, K R Puram Post, Bengaluru-560036., If any persons having right, title or interest in the schedule property must notify to the undersigned with documentary proof thereof within 10 days of this publication of this notice failing which it shall be presumed that no person has any right, title or interest in the schedule property and accordingly our client will proceed to purchase of the schedule property.

SCHEDULE PROPERTY

All that piece and parcel of an agricultural property bearing Sy.No. 59/6 measuring 33 ½ guntas situated at Ivarahalli Village, Kyasambahalli Hobli, K G F Taluk, Kolar District bounded as follows:-

East by : Property belongs to A N Dooraiswami Naidu, **West by :** Property belongs to K C Sriram

ಬ್ಯಾಂಕ್ ಆಫ್ ಬರೋಡ
बैंक ऑफ़ बड़ौदा
Bank of Baroda

ಬ್ಯಾಂಕ್ ಆಫ್ ಬರೋಡಾ, ಕೋಲಾರ ಶಾಖೆ,
ಎಂ ಬಿ ರಸ್ತೆ, ಕೋಲಾರ ಜಿಲ್ಲೆ-563101
ಇಮೇಲ್ ಐಡಿ: KOLAR@bankofbaroda.bank.in

ಆಸ್ತಿಗಳ ಮಾರಾಟದ ಸೂಚನೆ

ಅನುಬಂಧ-IV-A [ನಿಯಮ 6 (2) ಮತ್ತು 8 (6) ರ ನಿಬಂಧನೆಯನ್ನು ನೋಡಿ]

ಇ-ಹರಾಜು ಮಾರಾಟ ಪ್ರಕಟಣೆ ನಿಯಮ 6(2) & 8(6) ಸೆಕ್ಯೂರಿಟಿ ಇಂಟರೆಸ್ಟ್ (ಎನ್‌ಫೋರ್ಸ್‌ಮೆಂಟ್) ನಿಯಮ 2002 ರ ಸೆಕ್ಯೂರಿಟೈಜೇಷನ್ ಅಂಡ್ ರಿಕನ್ ಸ್ಟ್ರಕ್ಷನ್ ಆಫ್ ಫೈನಾನ್ಸಿಯಲ್ ಅಸೆಟ್ಸ್ ಅಂಡ್ ಎನ್‌ಫೋರ್ಸ್‌ಮೆಂಟ್ ಆಫ್ ಸೆಕ್ಯೂರಿಟಿ ಇಂಟರೆಸ್ಟ್ ಆಕ್ಟ್ 2002 ರಲ್ಲಿ ಸ್ಥಿರಾಸ್ತಿಗಳ ಹರಾಜು ಮಾರಾಟ. ನಿರ್ದಿಷ್ಟವಾಗಿ ಸಾಲಗಾರರಿಗೆ ಮತ್ತು ಅಡಮಾನುದಾರರಿಗೆ / ಜಾಮೀನುದಾರರಿಗೆ ಹಾಗೂ ಸಾರ್ವಜನಿಕರಿಗೆ ಈ ಮೂಲಕ ಸೂಚಿಸುವುದೇನೆಂದರೆ ಸೆಕ್ಯೂರ್ಡ್ ಕ್ರೆಡಿಟರ್‌ಗೆ ಅಡಮಾನ / ಚಾರ್ಜ್ ಮಾಡಿರುವ ಈ ಕೆಳಗೆ ಸೂಚಿಸಿರುವ ಆಸ್ತಿಗಳ ಅಧಿಕೃತ ಅಧಿಕಾರಿ, **ಬ್ಯಾಂಕ್ ಆಫ್ ಬರೋಡ** ಇವರು ಸ್ವಾಧೀನಕ್ಕೆ ಪಡೆದುಕೊಂಡಿದ್ದು, **"ಎಲ್ಲಿ ಹೇಗಿದೆಯೋ ಹಾಗೇ" ಎಲ್ಲಿ ಏನಿದೆಯೋ ಹಾಗೇ ಆಧಾರದ ಮೇಲೆ"** ಮಾರಾಟ ಮಾಡಲಾಗುವುದು. ಶಾಖೆ/ ಸಾಲಗಾರರ / ಜಾಮಿನುದಾರರ /ಅಡಮಾನದಾರರ ಆಸ್ತಿಯ ವಿವರ / ಬಾಕಿ ಮೊತ್ತ / ಮೀಸಲು ಬೆಲೆ / ಇ ಹರಾಜಿನ ದಿನಾಂಕ ಮತ್ತು ಸಮಯ, ಇಎಂಡಿ ಮತ್ತು ಬಿಡ್ ಗುಣಾಂಕಗಳನ್ನು ಕೆಳಗೆ ವಿವರಿಸಿದೆ.

ಕ್ರ ಸಂ	ಸಾಲಗಾರ/ರು/ ಖಾತರಿದಾರರು/ರು/ ಮಾಲೀಕರು(ರು) ಹೆಸರು ಮತ್ತು ವಿಳಾಸ	ತಿಳಿದಿರುವ ಋಣಭಾರಗಳನ್ನು ಹೊಂದಿರುವ ಸ್ಥಿರ/ಚರ ಆಸ್ತಿಯ ವಿವರವಾದ ವಿವರಣೆ, ಯಾವುದಾದರೂ ಇದ್ದರೆ	ಒಟ್ಟು ಖರ್ಚುಗಳು	ಇ-ಹರಾಜಿನ ದಿನಾಂಕ ಮತ್ತು ಸಮಯ	ಮೀಸಲು ಬೆಲೆ, ಇಎಂಡಿ, ಇಎಂಡಿ ಮೊತ್ತದ ಕೊನೆಯ ದಿನಾಂಕ ಮತ್ತು ಬಿಡ್ ಹೆಚ್ಚಳ ಮೊತ್ತ	ಸ್ವಾಧೀನದ ಸ್ಥಿತಿ	ಆಸ್ತಿ ತಪಾಸಣೆ ದಿನಾಂಕ ಮತ್ತು ಸಮಯ
01	1. ಮೇ: ಶ್ರೀ ಸಾಯಿ ವಿಷನ್, ಪ್ರೊ: ಶ್ರೀ ಸತೀಶ್ ಎನ್, ಚಲ್ಲ ಹಾಲು ಡೈರಿ ಮತ್ತು ನಮ್ಮೂರ	1) ಖಾತಾ ಸಂಖ್ಯೆ: ಪಿಐಡಿ ಸಂಖ್ಯೆ: 151900701600420014, ಪ್ಲಾಟ್ ಸಂಖ್ಯೆ 124, ಆಶ್ರಯ ಯೋಜನೆಯಡಿ ವಾರ್ಡ್ ಮತ್ತು ಬ್ಲಾಕ್ ಸಂಖ್ಯೆ. HUD 535 KHB91, ಆಸ್ತಿ	ರೂ. 1,10,23,493/- (ಒಂದು ಕೋಟಿ ಹತ್ತು ಲಕ್ಷ ಇಪ್ಪತ್ತಮೂರು ಸಾವಿರದ ನಾಲ್ಕುನೂರ ತೊಂಬತ್ತ	23-09-2026 ರಂದು ಮಧ್ಯಾಹ್ನ 2:00	ಮೀಸಲು ಬೆಲೆ: ರೂ. 92,00,000.00/- ಇಎಂಡಿ:	ಸಾಂಕೇತಿಕ ಸ್ವಾಧೀನ	ಅಧಿಕೃತ ಅಧಿಕಾರಿಯಿಂದ ಪೂರ್ವ